ಕರ್ನಾಟಕ ವಿಧಾನ ಪರಿಷತ್

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	698 (723)
2.	ಸದಸ್ಯರ ಹೆಸರು	:	ಶ್ರೀ ಸುನೀಲ್ ವಲ್ಯಾಪುರ್(ವಿಧಾನ ಸಭೆಯಿಂದ ಚುನಾಯಿತರಾದವರು)
3.	ಉತ್ತರಿಸುವ ದಿನಾಂಕ	:	25.9.2020
4.	ಉತ್ತರಿಸುವವರು	:	ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ಕಲಬುರಗಿ ಜಿಲ್ಲೆಯ ತಾಲ್ಲೂಕು ಪಂಚಾಯತ್‌ಗಳಲ್ಲಿ ಮಂಜೂರಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಹಾಗೂ ಖಾಲಿಯಾಗಿರುವ ಹುದ್ದೆಗಳೆಷ್ಟು (ತಾಲ್ಲೂಕುವಾರು ಮಾಹಿತಿ ಒದಗಿಸುವುದು)	(see table below)
(ಆ)	ತಾಲ್ಲೂಕು ಪಂಚಾಯತ್‌ಗಳಲ್ಲಿ ಖಾಯಂ ಸಿಬ್ಬಂದಿಯಿಲ್ಲದೆ ಗ್ರಾಮ ಪಂಚಾಯತಿಗಳಿಂದ ನಿಯೋಜನೆ ಮೇರೆಗೆ ನೇಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು
(ಇ)	ಹಾಗಿದ್ದಲ್ಲಿ, ಇದರಿಂದ ಗ್ರಾಮ ಪಂಚಾಯತ್‌ಗಳ ಅಭಿವೃದ್ಧಿಗೆ ತೊಂದರೆಯಾಗುವುದಿಲ್ಲವೇ; ಯಾವಾಗ ಖಾಯಂ ಸಿಬ್ಬಂದಿಯನ್ನು ನೇಮಿಸಲಾಗುವುದು?	ಗ್ರಾಮ ಪಂಚಾಯತ್ ಸಿಬ್ಬಂದಿಗಳನ್ನು ತಾಲ್ಲೂಕು ಪಂಚಾಯತ್‌ಗಳಿಗೆ ನಿಯೋಜಿಸಿರುವ ಕ್ರಮದಿಂದಾಗಿ, ಗ್ರಾಮ ಪಂಚಾಯತ್ ಅಭಿವೃದ್ಧಿಗೆ ಸ್ವಲ್ಪ ಪ್ರಮಾಣದ ತೊಂದರೆಯಾಗಿದ್ದು, ಅಧಿಕಾರಿ/ಸಿಬ್ಬಂದಿಗಳ ಲಭ್ಯತೆ, ಕಾರ್ಯಭಾರಕ್ಕೆ ಅನುಗುಣವಾಗಿ ನಿಯೋಜನೆಯನ್ನು ಮಾಡಲಾಗುತ್ತಿದೆ.

Answer to (ಅ):

ಕ್ರ.ಸಂ.	ತಾಲ್ಲೂಕಿನ ಹೆಸರು	ಮಂಜೂರಾದ ಹುದ್ದೆ	ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ	ಖಾಲಿ ಹುದ್ದೆಗಳ ಸಂಖ್ಯೆ
1	ಅಫಜಲಪೂರ	23	12	11
2	ಆಳಂದ	26	14	12
3	ಚಿಂಚೋಳಿ	24	8	16
4	ಚಿತ್ತಾಪೂರ	26	9	17
5	ಜೇವರ್ಗಿ	26	15	11
6	ಕಲಬುರಗಿ	26	13	13
7	ಸೇಡಂ	24	11	13
8	ಶಹಬಾದ್	14	2	12
9	ಕಮಲಾಪೂರ	14	1	13
10	ಕಾಳಗಿ	14	0	14
11	ಯಡ್ರಾಮಿ	14	0	14
	ಒಟ್ಟು	231	85	146

		1988ರಲ್ಲಿ ಅಸ್ತಿತ್ವಕ್ಕೆ ಬಂದಿದ್ದ ಜಿಲ್ಲಾ ಪರಿಷತ್ ವೃಂದ ಮತ್ತು ನೇಮಕಾತಿ ನಿಯಮಗಳನ್ನು ನಿರಶನಗೊಳಿಸಿ, ಹೊಸದಾಗಿ ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್‌ಗಳಿಗೆ ಅಧಿಕಾರಿ/ಸಿಬ್ಬಂದಿಗಳ ಮಂಜೂರು ಮಾಡಿ, ನೇಮಕಾತಿ ವಿಧಾನಗಳನ್ನು ನಿಗಧಿಪಡಿಸುವ ದಿಸೆಯಲ್ಲಿ ಸರ್ಕಾರವು ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ) (ವೃಂದ ಮತ್ತು ನೇಮಕಾತಿ) ನಿಯಮಗಳು 2019 ರ ಕರಡನ್ನು ದಿನಾಂಕ:18.5.2020 ರಂದು ಹೊರಡಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಭಾಧಿತರಿಂದ ಅರ್ಜಿಗಳು ಸ್ವೀಕೃತವಾದಲ್ಲಿ ಪರಿಶೀಲಿಸಿ, ಅಂತಿಮ ನಿಯಮಗಳನ್ನು ಪ್ರಕಟಿಸಲಾಗುವುದು. ನಂತರ ಸದರಿ ನಿಯಮಗಳಲ್ಲಿ ಕಲ್ಪಿಸುವ ಅವಕಾಶದಂತೆ ತಾಲ್ಲೂಕು ಪಂಚಾಯತ್ ಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಸಾಧ್ಯವಾಗುವುದು.

ಸಂಖ್ಯೆ:ಗ್ರಾಅಪ 214 ಕೆಎಸ್ಎಸ್ 2020

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು